# All India Radio: Bangalore
# Regional Bulletin In Kannada
# 07.01.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 07.01.2026 / 2.30 p.m.
**<><><><>**

ಮುಖ್ಯಾಂಶಗಳು

1. ತಮ್ಮ ಸುದೀರ್ಘ ಆಡಳಿತದ ಬಗ್ಗೆ ಸಂಪೂರ್ಣ ತೃಪ್ತಿಯಿದೆ - ಮುಖ್ಯಮಂತ್ರಿ ಸಿದ್ದರಾಮಯ್ಯ
2. ಹುಬ್ಬಳ್ಳಿಯಲ್ಲಿ ಮಹಿಳೆ ಮೇಲಿನ ಹಲ್ಲೆ ಪ್ರಕರಣ ; ಪೊಲೀಸರ ವಿರುದ್ಧ ಯಾವುದೇ ಸಾಕ್ಷ್ಯಾಧಾರ ಇಲ್ಲ ; ಮಹಿಳಾ ಆಯೋಗ ಸ್ಪಷ್ಟನೆ
3. ಬಳ್ಳಾರಿ ಘರ್ಷಣೆ ಪ್ರಕರಣ ; ಐಜಿ ವರ್ತಿಕಾ ಕಟಿಯಾರ್ ವರ್ಗಾವಣೆಗೊಳಿಸಿ ಸರ್ಕಾರ ಆದೇಶ
4. ಇಪ್ಪತ್ತೈದು ಲಕ್ಷ ರೂಪಾಯಿ ನಗದು ಪರಿಹಾರ ; ಸಚಿವ ಜಮೀರ್ ಅಹಮ್ಮದ್ ವಿರುದ್ಧ ಆದಾಯ ತೆರಿಗೆ ಇಲಾಖೆಗೆ ದೂರು
5. ಉಡುಪಿ ಪರ್ಯಾಯ ಹಿನ್ನೆಲೆ: ಮೂಲಸೌಕರ್ಯ ಕಲ್ಪಿಸಲು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಧಿಕಾರಿಗಳಿಗೆ ನಿರ್ದೇಶನ

<><><><>

ತಮ್ಮ ಸುದೀರ್ಘ ಆಡಳಿತದ ಬಗ್ಗೆ ತಮಗೆ ಸಂಪೂರ್ಣ ತೃಪ್ತಿಯಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಜಿಲ್ಲಾಡಳಿತದಿಂದ ಗೌರವ ವಂದನೆ ಸ್ವೀಕರಿಸಿದ ಬಳಿಕ, ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಯಾಗಿ ಎಷ್ಟು ದಿನ ಇರುವುದಾಗಿ ತಿಳಿದಿಲ್ಲ ಎಂದು ಹೇಳಿದ್ದಾರೆ. ಜನರ ಆಶೀರ್ವಾದದಿಂದ ಇಲ್ಲಿಯವರೆಗೆ ಬಂದಿರುವುದಾಗಿ ಸ್ಪಷ್ಟಪಡಿಸಿದ್ದಾರೆ. ಈ ವೇಳೆ ವೈದ್ಯಕೀಯ ಶಿಕ್ಷಣ ಸಚಿವ ಶರಣ್‌ಪ್ರಕಾಶ್ ಪಾಟೀಲ್ ವಿಧಾನಪರಿಷತ್ ಮುಖ್ಯ ಸಚೇತಕ ಸಲೀಂ ಅಹಮ್ಮದ್ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

<><><><>

ಹುಬ್ಬಳ್ಳಿಯಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ ಪೊಲೀಸರು ಹಲ್ಲೆ ನಡೆಸಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಶಶಿ ಕುಮಾರ್ ಸ್ಪಷ್ಟನೆ ನೀಡಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಂಧಿತ ಮಹಿಳೆ ಮೇಲೆ ಒಟ್ಟು ೯ ಪ್ರಕರಣ ದಾಖಲಾಗಿದೆ. ಪೊಲೀಸರು ವಶಕ್ಕೆ ಪಡೆಯುವಾಗ ಆಕೆಯೇ ಮಹಿಳೆ ಹಾಗೂ ಪುರುಷ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದಾಳೆ ಎಂದು ಸ್ಪಷ್ಟನೆ ನೀಡಿದ್ದಾರೆ.

**ಧ್ವನಿ: ಶಶಿಕುಮಾರ್ (೨೦ ಸೆಕೆಂಡ್‌ಗಳು)**

ಈ ನಡುವೆ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ, ಪ್ರತಿಕ್ರಿಯಿಸಿ ಮಹಿಳೆಯ ವಿರುದ್ಧ ಹಲವು ದೂರುಗಳಿದ್ದು, ಪೊಲೀಸರು ಬಂಧಿಸಲು ತೆರಳಿದ್ದರು. ಪೊಲೀಸರ ವಿರುದ್ಧ ಯಾವುದೇ ಸಾಕ್ಷ್ಯಾಧಾರ ಇಲ್ಲ ಎಂದು ಸ್ಪಷ್ಟ ಪಡಿಸಿರುವ ಅವರು, ಘಟನೆ ಕುರಿತಂತೆ ತನಿಖೆ ನಡೆಸುವುದಾಗಿ ತಿಳಿಸಿದ್ದಾರೆ. ತಪ್ಪಿತಸ್ಥರು ಯಾರೇ ಆಗಲಿ ಶಿಕ್ಷೆಯಾಗಬೇಕು ಎಂದು ಹೇಳಿದ್ದಾರೆ.

<><><>

ಬಳ್ಳಾರಿಯಲ್ಲಿ ಬ್ಯಾನರ್ ವಿಚಾರವಾಗಿ ನಡೆದ ಘರ್ಷಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಬ್ಬ ಹಿರಿಯ ಅಧಿಕಾರಿಯನ್ನು ವರ್ಗಾವಣೆ ಮಾಡಲಾಗಿದೆ. ಪೊಲೀಸ್ ವರಿಷ್ಠಾಧಿಕಾರಿ ಪವನ್ ನೆಜ್ಜೂರ್ ಅವರನ್ನು ಅಮಾನತುಗೊಳಿಸಿದ ಬೆನ್ನಲ್ಲೆ ಐಜಿ ವರ್ತಿಕಾ ಕಟಿಯಾರ್ ಅವರನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಬಳ್ಳಾರಿ ವಲಯಕ್ಕೆ ನೂತನ ಐಜಿಯಾಗಿ ಹರ್ಷಗುಪ್ತ ಹಾಗೂ ನೂತನ ಎಸ್‌ಪಿಯಾಗಿ ಡಾ. ಸುಮನ್ ಡಿ. ಪನ್ನೇಕರ್ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದೆ. ಬಳ್ಳಾರಿ ಐಜಿಯಾಗಿದ್ದ ವರ್ತಿಕಾ ಕಟಿಯಾರ್ ಪ್ರಕರಣವನ್ನು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿರಲಿಲ್ಲ. ಈ ಹಿನ್ನೆಲೆಯಲ್ಲಿ ಇವರ ವಿರುದ್ಧವು ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರಕ್ಕೆ ವರದಿ ಸಲ್ಲಿಕೆಯಾಗಿತ್ತು.

<><><>

ಬಳ್ಳಾರಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾವನ್ನಪ್ಪಿದ ಕಾಂಗ್ರೆಸ್ ಕಾರ್ಯಕರ್ತನ ಕುಟುಂಬಕ್ಕೆ ೨೫ ಲಕ್ಷ ರೂಪಾಯಿ ನಗದು ಪರಿಹಾರ ನೀಡಿದ ಉಸ್ತುವಾರಿ ಸಚಿವ ಜಮೀರ್ ಅಹಮ್ಮದ್ ವಿರುದ್ಧ ಆದಾಯ ತೆರಿಗೆ ಇಲಾಖೆಯಲ್ಲಿ ದೂರು ದಾಖಲಾಗಿದೆ. ತೇಜಸ್ ಗೌಡ ಎಂಬುವವರು ದೂರು ದಾಖಲಿಸಿದ್ದು, ಸಚಿವರು ಆರ್‌ಬಿಐ ನಿಯಮಗಳನ್ನು ಉಲ್ಲಂಘಿಸಿದ್ದಾರೆ

ಎಂದು ಆರೋಪಿಸಿದ್ದಾರೆ. ಪರಿಹಾರವಾಗಿ ನೀಡಲಾದ ನಗದಿನ ಮೂಲದ ಬಗ್ಗೆ ತನಿಖೆ ನಡೆಸಬೇಕೆಂದು ಒತ್ತಾಯಿಸಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ ದಾಖಲೆಯನ್ನು ಮುರಿದಿರುವ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವ್ಯಂಗ್ಯವಾಡಿದ್ದಾರೆ. ಇದು ಭ್ರಮೆ ಹೊರತು ಬೇರೇನು ಅಲ್ಲ ಎಂದು ತಿಳಿಸಿದ್ದಾರೆ. ದೇವರಾಜ ಅರಸು ಅವರು, ಮಾಜಿ ಪ್ರಧಾನಿ ಇಂದಿರಾಗಾಂಧಿಯವರಿಗೆ ರಾಜಕೀಯ ಪುನರ್‌ಜನ್ಮ ನೀಡಿದ್ದರು. ವೃದ್ಧಾಪ್ಯ, ವಿಧವಾ ಪಿಂಚಣಿಯನ್ನು ಪರಿಚಯಿಸುವ ಮೂಲಕ ಧ್ವನಿ ಇಲ್ಲದವರಿಗೆ ದನಿಯಾಗಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಡಿದ ಸಾಧನೆಗಳೇನು ಎಂದು ವಿಜಯೇಂದ್ರ ಪ್ರಶ್ನಿಸಿದ್ದಾರೆ.

<><><>

ಉಡುಪಿ ಪರ್ಯಾಯದ ಹಿನ್ನೆಲೆಯಲ್ಲಿ ಸುಮಾರು ೭ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮೂಲ ಸೌಕರ್ಯಗಳನ್ನು ಒದಗಿಸುವ ಕುರಿತು ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಿಲ್ಲೆಯ ಶಾಸಕರು ಹಾಗೂ ಅಧಿಕಾರಿಗಳ ಜೊತೆ ವಿಡಿಯೋ ಸಂವಾದ ನಡೆಸಿದ ಸಚಿವರು, ಪರ್ಯಾಯ ಸುಗಮವಾಗಿ ನಡೆಯಲು ರಸ್ತೆ ಅಭಿವೃದ್ಧಿ ಸೇರಿದಂತೆ ನಗರದಲ್ಲಿ ಅಗತ್ಯವಿರುವ ಎಲ್ಲ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದ್ದಾರೆ. ಜಿಲ್ಲೆಯ ಎಲ್ಲ ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಯಾವುದೇ ಕೊರತೆಯಾಗದಂತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

ನರೇಗಾದಡಿ ವಿನೂತನ ತಂತ್ರಜ್ಞಾನ, ಪಾರದರ್ಶಕತೆ ಕಾಂಗ್ರೆಸ್ಸಿಗರಿಗೆ ದೊಡ್ಡ ಸವಾಲಾಗಿದೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ೧೫ ಯೋಜನೆಗಳು ರಾಜೀವ್ ಗಾಂಧಿ, ಇಂದಿರಾ ಗಾಂಧಿ ಹೆಸರಿನಲ್ಲಿವೆ. ಶೈಕ್ಷಣಿಕ ಸಂಸ್ಥೆಗಳಲ್ಲಿ ೫೫ ರಾಜೀವ್ ಗಾಂಧಿ, ೧೯ ಇಂದಿರಾ ಗಾಂಧಿ ಹೆಸರಿನಲ್ಲಿ ಮತ್ತು ೧೧ ನೆಹರೂ ಹೆಸರಿನಲ್ಲಿ  ಇವೆ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ವಿಕಸಿತ ಭಾರತ-ಜಿ ರಾಮ್ ಜಿ ಎಂಬ ಯೋಜನೆ ಜಾರಿಗೊಳಿಸಿ, ಭ್ರಷ್ಟಾಚಾರ ತಡೆ, ನಿಜವಾದ ಬಡವರಿಗೆ ಕೂಲಿ ಕೆಲಸ ನೀಡಲು ಅನುಕೂಲ ಆಗುವ ಹೊಸ ವ್ಯವಸ್ಥೆ ಜಾರಿಗೆ ತಂದಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><><>

ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಮತ್ತು ಇಂಟರ್ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಬಿಸಿನೆಸ್ ಸ್ಟಡೀಸ್ ಸಂಯುಕ್ತ ಆಶ್ರಯದಲ್ಲಿ ಜ್ಞಾನಜ್ಯೋತಿ ಸಭಾಂಗಣದಲ್ಲಿ *ನೆಕ್ಸಸ್ ಎಡ್ಜ್ ೨೦೧೯* 'ಉದ್ಯಮ ಆಡಳಿತ ನಿರ್ವಹಣೆ ಸಮಾವೇಶ' ಏರ್ಪಡಿಸಲಾಗಿತ್ತು. ಕುಲಪತಿ ಪ್ರೊಫೆಸರ್.ರಮೇಶ್.ಬಿ. ಮಾತನಾಡಿ, ಡಿಜಿಟಲೀಕರಣ ಮತ್ತು ಕೃತಕ ಬುದ್ಧಿಮತ್ತೆಯ ಅಳವಡಿಕೆಯ ಇಂದಿನ ಕಾಲಘಟ್ಟಕ್ಕೆ ತಕ್ಕಂತೆ ಶಿಕ್ಷಣ ವ್ಯವಸ್ಥೆಯಲ್ಲಿ ಕ್ರಾಂತಿಕಾರಕ ಪರಿವರ್ತನೆ ತರಬೇಕಾದ ಅಗತ್ಯವಿದೆ ಎಂದು ಪ್ರತಿಪಾದಿಸಿದ್ದಾರೆ. ವಿವಿಧ ಉದ್ಯಮ ಸಂಸ್ಥೆಗಳೊಂದಿಗೆ ಸಹಭಾಗಿತ್ವದ ಮೂಲಕ ನೇರ ನೇಮಕಾತಿ ಅವಕಾಶಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><>

ದಾವಣಗೆರೆ ದಕ್ಷಿಣ ಮತ್ತು ಉತ್ತರ ವಿಧಾನಸಭಾ ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗಾಗಿ ಶೀಘ್ರದಲ್ಲೇ ೧೦೦ ಕೋಟಿ ರೂಪಾಯಿ ಅನುದಾನ ಬಿಡುಗಡೆಯಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದ್ದಾರೆ. ದಾವಣಗೆರೆಯ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ ಉನ್ನತ ಶಿಕ್ಷಣ ಇಲಾಖೆಯಿಂದ ಬಿಡುಗಡೆಗೊಂಡಿರುವ ೪ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ನಗರದ ೧ನೇ ವಾರ್ಡ್ ನಲ್ಲಿ ಮೆಟ್ರಿಕ್ ನಂತರದ ವಸತಿ ನಿಲಯದ ಕಟ್ಟಡ ನಿರ್ಮಾಣದ ಕಾಮಗಾರಿಯನ್ನು ೪ ಕೋಟಿ ರೂಪಾಯಿ ಮೊತ್ತದಲ್ಲಿ ಆರಂಭಿಸಲಾಗಿದ್ದು, ಮುಂಬರುವ ಶೈಕ್ಷಣಿಕ ವರ್ಷದಿಂದ ವಿದ್ಯಾರ್ಥಿಗಳಿಗೆ ಲಭ್ಯವಾಗಲಿದೆ ಎಂದು ಹೇಳಿದ್ದಾರೆ.

<><><>

ದೇಶದಲ್ಲಿ ಕೃಷಿ ಬಳಿಕ ಅತ್ಯಧಿಕವಾಗಿ ಉದ್ಯೋಗಗಳನ್ನು ಸೃಷ್ಟಿಸುವಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮ ಎರಡನೇ ಸ್ಥಾನದಲ್ಲಿದೆ ಎಂದು ಯಾದಗಿರಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಸತೀಶ್ ಕುಮಾರ್ ತಿಳಿಸಿದ್ದಾರೆ. ಯಾದಗಿರಿ ನಗರದ ಖಾಸಗಿ ಹೋಟೆಲ್ ನಲ್ಲಿ ರ್‍ಯಾಂಪ್ ಯೋಜನೆಯಡಿ ಆಯೋಜಿಸಿದ ಟ್ರೇಡ್ಸ್ ಮತ್ತು ಇಎಸ್‌ಎಂ ಕುರಿತ ಅರಿವು ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಎಂಎಸ್‌ಎಂಇ ಬಲವರ್ಧನೆಗೆ

ಪ್ರತಿ ವರ್ಷ ೧ ಸಾವಿರದ ೬೦೦ ಕೋಟಿಯಷ್ಟು ಅನುದಾನ ಖರ್ಚು ಮಾಡುತ್ತಿದೆ. ಉದ್ಯಮಿಗಳು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

<><><><>

ರಾಷ್ಟ್ರೀಯ ಮಟ್ಟದ  ಚಿತ್ರ-ಶಿಲ್ಪ-ಸಾಂಸ್ಕೃತಿಕ ಮೇಳ 'ಕಲಾಪರ್ಬ'ಕ್ಕೆ ಕಡಲ ತಡಿ ಮಂಗಳೂರು ಸಜ್ಜಾಗುತ್ತಿದೆ. ಮಂಗಳೂರಿನ ಶರಧಿ ಪ್ರತಿಷ್ಠಾನದ ನೇತೃತ್ವದಲ್ಲಿ ಇದೇ ೯ರಿಂದ ೧೧ರವರೆಗೆ ಕದ್ರಿ ಉದ್ಯಾನವನದಲ್ಲಿ  ಕಲಾಪರ್ಬ ನಡೆಯಲಿದೆ ಎಂದು ಕರಾವಳಿ ಚಿತ್ರಕಲಾ ಚಾವಡಿಯ ಕಾರ್ಯದರ್ಶಿ ಎಸ್.ಎಂ.ಶಿವಪ್ರಕಾಶ್ ತಿಳಿಸಿದ್ದಾರೆ. ವಿಧಾನ ಸಭಾ ಅಧ್ಯಕ್ಷ ಯು.ಟಿ.ಖಾದರ್ ಕಲಾಪರ್ಬಕ್ಕೆ ಚಾಲನೆ ನೀಡಲಿದ್ದಾರೆ. ಈ ಉತ್ಸವದಲ್ಲಿ ೧೦ಸಾವಿರಕ್ಕೂ ಅಧಿಕ ಕಲಾಕೃತಿಗಳ ಪ್ರದರ್ಶನವಾಗಲಿದ್ದು, ಕಲಾ ಲೋಕ ಸೃಷ್ಟಿಯಾಗಲಿದೆ.  ೮ ವರ್ಷದ ಎಳೆಯ ಪ್ರತಿಭೆಗಳಿಂದ ಹಿಡಿದು  ೮೦ ವರ್ಷದವರೆಗಿನ ಹಿರಿಯ ಕಲಾವಿದರು ಪಾಲ್ಗೊಂಡು ಈ ಕಲಾಮೇಳದ ವೈಶಿಷ್ಟ್ಯತೆ ಸಾರಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು

<><>